# 2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿತ್ರದುರ್ಗ

## ಎಸ್.ಸಿ./ಎಸ್.ಟಿ. ನಂ. 23/2025

ಪ್ರ.ವ.ಬೋ. ದಿನಾಂಕ - 02.04.2026

| | | | |
|---|---|---|---|
| ಸಾಕ್ಷಿದಾರರ ಹೆಸರು | - ಕರಿಯಮ್ಮ | ಫ್ರಾ.ಸಾ. | - 04 |
| ತಂದೆಯ ಹೆಸರು | - ಅಂಜಿನಪ್ಪ | ಚಾ.ಸಾ. | - 04 |
| ವಯಸ್ಸು | - 38 ವರ್ಷ | | |
| ಉದ್ಯೋಗ | - ಕೂಲಿ ಕೆಲಸ | | |
| ವಾಸ ಸ್ಥಳ | - ರಾಮಘಟ್ಟ | | |

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಖ್ಯ ವಿಚಾರಣೆ – ಸರ್ಕಾರಿ ಅಭಿಯೋಜಕರಿಂದ –**

ಸಾಕ್ಷಿಗೆ ನೋಟಿಸ್ ನ್ನು ತೋರಿಸಲಾಗಿ  ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ನೋಟೀಸ್ ನ್ನು ಈಗಾಗಲೇ  ನಿಪಿ–3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ–3(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಶವ ಪಂಚನಾಮೆಯನ್ನು  ತೋರಿಸಲಾಗಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಶವ ಪಂಚನಾಮೆಯನ್ನು ಈಗಾಗಲೇ ನಿಪಿ–4 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ–4(ಸಿ) ಎಂದು ಗುರುತಿಸಲಾಯಿತು. ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಯಲ್ಲಿ ಸಹಿ ಮಾಡಿರುತ್ತೇನೆ. ಆಸ್ಪತ್ರೆಯಲ್ಲಿ ಯಾವುದೇ ಶವವನ್ನು ನೋಡಿರುವುದಿಲ್ಲ. ನಿಪಿ–3 ಮತ್ತು 4 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ.

(ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿದ್ದು ಸಾಕ್ಷಿಯ  ಸಾಕ್ಷ್ಯವನ್ನು ಪರಿಗಣಿಸಿ ಅನುಮತಿ ನೀಡಲಾಯಿತು. )

**ಪಾಟೀ ಸವಾಲುಃ– ಸರ್ಕಾರಿ ಅಭಿಯೋಜಕರಿಂದ.**

ದಿಃ 16.04.2025 ರಂದು ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಗೆ ನನ್ನನ್ನು ಕರೆಸಿದ್ದು ಆಶಾ ಗಂಡ ಮಧು ಇವರ ಮೃತ ದೇಹದ ಶವ ಪಂಚನಾಮೆಯನ್ನು ನನ್ನ ಸಮಕ್ಷಮ ಮಾಡಿ ನಿಪಿ–4 ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ

ಸರಿಯಲ್ಲ. ಸದರಿ ಶವದ ಬಾಯಿ ಮತ್ತು ಮೂಗಿನಿಂದ, ಎಡ ಕಿವಿ, ಬಲ ಕಿವಿ ಯಿಂದ ರಕ್ತ ಹೊರ ಬಂದಿದ್ದು, ಕುತ್ತಿಗೆ ಎಡಭಾಗದಲ್ಲಿ, ಬಲಭಾಗದ ಭುಜದ ಕೆಳಗೆ, ತಲೆಯ ಎಡಭಾಗದಲ್ಲಿ ಗಾಯಗಳು ಕಂಡು ಬಂದಿತ್ತು ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ಪಂಚನಾಮೆ ಮಾಡಿದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಡಿ.ಎಂ.ಬಿ. ವಕೀಲರಿಂದ**

ಪಾಟೀ ಸವಾಲು ಇರುವುದಿಲ್ಲ.

**ಮರು ವಿಚಾರಣೆ ಇಲ್ಲ:**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ವಿಶೇಷ, 2 ನೇ ಅಪರ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಚಿತ್ರದುರ್ಗ.